ಅಸಲು ದಾವಾ ಸಂಖ್ಯೆ **188/2018** ಪಿ. ಡಬ್ಲ್ಯೂ-**1**

ಸಾಕ್ಷಿಗೆ ದಿನಾಂಕ **12-11-2024** ರಂದು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ನೀಡಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಎಂ ಇ ಹೆಚ್ ವಾದಿಯ ಪರ ವಕೀಲರಿಂದ

ನಾನು ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿವೆ, ಅದರಲ್ಲಿರುವ ಅಂಶಗಳನ್ನು ಅರ್ಥೈಸಿಕೊಂಡ ನಂತರ ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ಒಂದು ಗಣಕೀಕೃತ ಪಹಣಿ ಪತ್ರಿಕೆ ಹಾಜರು ಪಡಿಸಿದ್ದು ಅದನ್ನು ನಿಪಿ-**1** ಎಂದು ಗುರುತಿಸಲಾಯಿತು. **2** ಕೈಬರವಣಿಗೆ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-**2** ಮತ್ತು **3** ಎಂದು ಗುರುತಿಸಲಾಯಿತು. ಕೈ ಬರವಣಿಗೆ ಎಂ ಆರ್ ನ ದೃಡೀಕೃತ ಪ್ರತಿ ಹಾಜರು ಪಡಿಸಿದ್ದು ಅದನ್ನು ನಿಪಿ-**4** ಎಂದು ಗುರುತಿಸಲಾಯಿತು. ದಿನಾಂಕ **09-10-1984** ರ ತಹಶೀಲ್ದಾರವರ ಅಧಿಕೃತ ಜ್ಞಾಪನ ಪತ್ರ ಹಾಜರು ಪಡಿಸಿದ್ದು ಅದನ್ನು ನಿಪಿ-**5** ಎಂದು ಗುರುತಿಸಲಾಯಿತು. ದಿನಾಂಕ **24-01-1985** ರ ನೊಂದಾಯಿತ ಕ್ರಯಪತ್ರದ ದೃೀಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-**6** ಎಂದು ಗುರುತಿಸಲಾಯಿತು. ದಿನಾಂಕ **20-032-1998** ರ ನೊಂದಾಯಿತ ಕ್ರಯಪತ್ರದ ದೃೀಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-**7** ಎಂದು ಗುರುತಿಸಲಾಯಿತು. ದಿನಾಂಕ **13-08-2021** ರ ಅರ್ಜಿಯ ಮಾಹಿತಿ ಹಕ್ಕಿನಡಿ ಪಡೆದಿರುವ ನಕಲು ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-**8** ಎಂದು ಗುರುತಿಸಲಾಯಿತು. ದಿನಾಂಕ **04-10-2021** ರ ಪಿಡಿ ಒ ರವರ ವರದಿಯ ಮಾಹಿತಿ ಹಕ್ಕಿನಡಿ ಪಡೆದಿರುವ ನಕಲು ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-**9** ಎಂದು ಗುರುತಿಸಲಾಯಿತು. ದಿನಾಂಕ **24-01-1985** ರ ನೊಂದಾಯಿತ

ಕ್ರಯಪತ್ರದ ಮಾಹಿತಿ ಹಕ್ಕಿನಡಿ ಪಡೆದಿರುವ ನಕಲು ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-**10** ಎಂದು ಗುರುತಿಸಲಾಯಿತು. **3** ಅಸೆಸೆಮೆಂಟ್ ದೃಡೀಕೃತ ನಕಲು ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ **11** ರಿಂದ **13** ಎಂದು ಗುರುತಿಸಲಾಯಿತು. ಎರಡು ಪೋಟೋವನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ **14** ಮತ್ತು **15** ಎಂದು ಗುರುತಿಸಲಾಯಿತು. ನಿಪಿ **14** ಮತ್ತು **15** ಕ್ಕೆ ಸಂಬಂಧಿಸಿದ ಒಂದು ಸಿಡಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ **16** ಎಂದು ಗುರುತಿಸಲಾಯಿತು. ದಿನಾಂಕ **16-02-2022** ರ ಲಾಳನಕೆರೆ ಗ್ರಾಮ ಪಂಚಾಯಿತಿಯ ಎರಡು ಹಿಂಬರಹಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ **17** ಮತ್ತು **18** ಎಂದು ಗುರುತಿಸಲಾಯಿತು. **3** ಪೋಟೋಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ **19** ರಿಂದ **21** ಎಂದು ಗುರುತಿಸಲಾಯಿತು. ನಿಪಿ **19** ರಿಂದ **21** ಕ್ಕೆ ಸಂಬಂಧಿಸಿದ ಸಿಡಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ **22** ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

**ಸಾ. ಹೇ. ಬಿ. ಮಾಡಿಸಲಾಯಿತು.**

**ಓ.ಹೇ.ಕೇ.ಸ.ಇದೆ**

ಅಪರ **ಸಿವಿಲ್ ನ್ಯಾಯಾಧೀಶರು**
**ನಾಗಮಂಗಲ**